ಸ್ವಾಧೀನ ಮತ್ತು ವರ್ಗಾವಣೆ) ಅಧಿನಿಯಮ, 1999ರ ಸ್ವಾಧೀನತೆ ವ್ಯವಹರಣೆಗಳ ಕಾರ್ಯವನ್ನು ಕೈಬಿಡಲು ಸರ್ಕಾರ ತೀರ್ಮಾನಿಸಿದೆ.

ಶಿವಮೊಗ್ಗ ನಗರದಲ್ಲಿರುವ ಕುವೆಂಪು ರಂಗ ಮಂದಿರ.

1501 ( 1902)

ಶ್ರೀ ಹೆಚ್.ಎಂ.ಚಂದ್ರಶೇಖರಪ್ಪ (ಶಿವಮೊಗ್ಗ): ಮಾನ್ಯ ಕನ್ನಡ ಮತ್ತು ಸಂಸ್ಕೃತಿ ಇಲಾಖಾ ರಾಜ್ಯ ಸಚಿವೆಯವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

1) ಶಿವಮೊಗ್ಗ ನಗರದಲ್ಲಿರುವ ಕುವೆಂಪು ರಂಗಮಂದಿರದ ಸುಣ್ಣ ಬಣ್ಣ ಮಾಡಿಸಲು ಅನುದಾನ ಬಿಡುಗಡೆ ಮಾಡಲಾಗಿದೆಯೆ? ವಿವರ ನೀಡುವುದು?

ಶ್ರೀಮತಿ ರಾಣಿ ಸತೀಶ್ (ಕನ್ನಡ ಮತ್ತು ಸಂಸ್ಕೃತಿ ಇಲಾಖೆ ರಾಜ್ಯ ಸಚಿವೆಯವರು):

1) ಇಲ್ಲ.

ಶಿವಮೊಗ್ಗ ತಾಲ್ಲೂಕಿನಲ್ಲಿ ಬರುವ ಕೆರೆಗಳಲ್ಲಿ ಮೀನುಮರಿ ಉತ್ಪಾದನೆ.

1502 ( 1904)

ಶ್ರೀ ಚಂದ್ರಶೇಖರಪ್ಪ ಹೆಚ್.ಎಂ.(ಶಿವಮೊಗ್ಗ): ಮಾನ್ಯ ಮೀನುಗಾರಿಕೆ ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯಪಿಟ್ಟು ಉತ್ತರಿಸುವರೆ?

1) ಶಿವಮೊಗ್ಗ ತಾಲ್ಲೂಕಿನಲ್ಲಿ ಬರುವ ಎಷ್ಟು ಕೆರೆಗಳಲ್ಲಿ ಮೀನು ಮರಿ ಬಿಡಲಾಗಿದೆ ಹಾಗೂ ಇವುಗಳಿಂದ ಸರ್ಕಾರಕ್ಕೆ ಬರುವ ಆದಾಯವೆಷ್ಟು? ವಿವರ ನೀಡುವುದು?

ಶ್ರೀ ಬಿ.ರಮಾನಾಥ ರೈ (ಮೀನುಗಾರಿಕೆ, ಬಂದರು ಮತ್ತು ಪ್ರದೇಶಾಭಿವೃದ್ಧಿ ಸಚಿವರು):

1) ಶಿವಮೊಗ್ಗ ತಾಲ್ಲೂಕಿನಲ್ಲಿನ 231 ಕೆರೆಗಳಲ್ಲಿ 24,205 ಲಕ್ಷ ಬಿತ್ತನೆ ಮರಿಗಳನ್ನು ಬಿತ್ತಲಾಗಿದ್ದು ರೂ: 3.06 ಲಕ್ಷ ಆದಾಯವನ್ನು ಗಳಿಸಲಾಗಿದೆ. ವಿವರ ಈ ಕೆಳಕಂಡಂತಿದೆ.